**All India Radio: Bangalore**
**National Bulletin In Kannada**
**18.06.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**18.06.2026 19.35 hrs**

---

ಮುಖ್ಯಾಂಶಗಳು

೧. ಕರ್ನಾಟಕ ವಿಧಾನಪರಿಷತ್ ಚುನಾವಣೆ; ಕಾಂಗ್ರೆಸ್‌ನ ಐವರು, ಬಿಜೆಪಿಯ ಇಬ್ಬರು ಅಭ್ಯರ್ಥಿಗಳಿಗೆ ಗೆಲುವು

೨. ಪ್ಯಾರಿಸ್‌ನಲ್ಲಿ ಪ್ರಮುಖ ಉದ್ಯಮಿಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಉನ್ನತ ಮಟ್ಟದ ಸಭೆ

೩. ಪ್ರಧಾನಮಂತ್ರಿ ವಿಕಸಿತ ಭಾರತ್ ಉದ್ಯೋಗ ಯೋಜನೆಯಡಿ ನಾಳೆ ಪ್ರಧಾನಿ ಅವರಿಂದ ಪ್ರೋತ್ಸಾಹಧನ ವಿತರಣೆ

೪. ಆಹಾರ ಭದ್ರತೆ ಖಚಿತಪಡಿಸಿಕೊಳ್ಳಲು ವೈಜ್ಞಾನಿಕ ಸಂಗ್ರಹಣೆ, ಧಾನ್ಯಗಳ ಪರಿಣಾಮಕಾರಿ ವಿತರಣೆ ಅಗತ್ಯ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೫. ೭೨ ಸಾವಿರದ ೩೭೦ ಮೆಟ್ರಿಕ್ ಟನ್ ಸರಕು ಹೊತ್ತ ಎಲ್‌ಎನ್‌ಜಿ ವಾಹಕ 'ದಿಶಾ' ನಾಳೆ ಗುಜರಾತ್ ಬಂದರಿಗೆ ಆಗಮನ

---

ಕರ್ನಾಟಕ ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್‌ನ ಐವರು ಅಭ್ಯರ್ಥಿಗಳು ಮತ್ತು ಬಿಜೆಪಿಯ ಇಬ್ಬರು ಅಭ್ಯರ್ಥಿಗಳು ಜಯಶೀಲರಾಗಿದ್ದಾರೆ. ೧೪ ಮತಗಳನ್ನು ಪಡೆದ ಜೆಡಿಎಸ್ ಅಭ್ಯರ್ಥಿ ಗೋವಿಂದ ರಾಜು ಪರಾಭವಗೊಂಡಿದ್ದಾರೆ.

ಚುನಾವಣೆಯಲ್ಲಿ ಕಾಂಗ್ರೆಸ್‌ನ ಬಿ.ಕೆ.ಹರಿಪ್ರಸಾದ್ ೩೦ ಮತಗಳು, ಪಿ.ವಿ.ಮೋಹನ್ ೨೯ ಮತಗಳು, ಬಿ.ಎಸ್.ಶಿವಣ್ಣ ೩೦ ಮತಗಳು, ತಿಪ್ಪಣ್ಣಪ್ಪ ಕಮಕನೂರ ೩೦ ಮತಗಳು ಹಾಗೂ ವಿನಯ್ ಕಾರ್ತಿಕ್ ೩೨ ಮತಗಳನ್ನು ಪಡೆದಿದ್ದಾರೆ. ಇದೇ ವೇಳೆ, ಬಿಜೆಪಿಯ ರಘು ಕೌಟಿಲ್ಯ ೨೯ ಮತಗಳು ಹಾಗೂ ಲಿಂಗರಾಜ ಪಾಟೀಲ್ ೨೭ ಮತಗಳನ್ನು ಪಡೆದು ಗೆಲುವು ಸಾಧಿಸಿದ್ದಾರೆ.

೨೨೨ ಶಾಸಕರ ಮತಗಳ ಪೈಕಿ ಒಂದು ಮತ ಅಸಿಂಧುವಾಗಿದೆ.

---

ಭಾರತ-ಫ್ರಾನ್ಸ್ ಆರ್ಥಿಕ ಮತ್ತು ಕೈಗಾರಿಕಾ ಸಹಕಾರವನ್ನು ಗಾಢಗೊಳಿಸುವ ಪ್ರಯತ್ನಗಳ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಪ್ಯಾರಿಸ್‌ನಲ್ಲಿ ಪ್ರಮುಖ ಉದ್ಯಮಿಗಳೊಂದಿಗೆ ಉನ್ನತ ಮಟ್ಟದ ಸಭೆಗಳನ್ನು ನಡೆಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗೆ ವಿವಾಟೆಕ್ ೨೦೨೬ ರಲ್ಲಿ ಭಾಗವಹಿಸಲಿದ್ದಾರೆ.

ವಿವಾಟೆಕ್ ಶೃಂಗಸಭೆಯು ಯುರೋಪಿನ ಅತಿದೊಡ್ಡ ತಂತ್ರಜ್ಞಾನ ಮತ್ತು ನವೋದ್ಯಮ ಕಾರ್ಯಕ್ರಮವಾಗಿದ್ದು, ಅಲ್ಲಿ ಪ್ರಧಾನಿ ಮೋದಿ ಅವರು ಭಾರತದ ಬೆಳೆಯುತ್ತಿರುವ ನಾವೀನ್ಯತೆ ಪರಿಸರ ವ್ಯವಸ್ಥೆ ಮತ್ತು ತಾಂತ್ರಿಕ ಪ್ರಗತಿಯನ್ನು ಪ್ರಸ್ತಾಪಿಸಲಿದ್ದಾರೆ. ಈ ಆವೃತ್ತಿಯ ವಿವಾಟೆಕ್ ಶೃಂಗಸಭೆಯಲ್ಲಿ ಭಾರತ ಅತಿದೊಡ್ಡ ರಾಷ್ಟ್ರೀಯ ವೇದಿಕೆಯನ್ನು ಹೊಂದಿರುತ್ತದೆ. ಇದು ಭಾರತೀಯ ಮತ್ತು ಯುರೋಪಿಯನ್ ನಾವೀನ್ಯತೆ ಪರಿಸರ ವ್ಯವಸ್ಥೆಗಳ ನಡುವಿನ ಪಾಲುದಾರಿಕೆಯ ಅಗಾಧ ಸಾಮರ್ಥ್ಯದ ಸಂಕೇತವಾಗಿದೆ.

ನಂತರ ಪ್ರಧಾನಿ ನರೇಂದ್ರ ಮೋದಿ ಅವರು ಭಾರತೀಯ ಸಮುದಾಯದ ಸದಸ್ಯರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಫ್ರಾನ್ಸ್‌ನ ಪ್ಯಾರಿಸ್‌ನಲ್ಲಿ ಆಲ್ಸ್ಟೋಮ್‌ನ ಸಿಇಒ ಮಾರ್ಟಿನ್ ಸಿಯಾನ್ ಅವರನ್ನು ಭೇಟಿಯಾದರು.

ಸಭೆಯಲ್ಲಿ, ಪ್ರಧಾನ ಮಂತ್ರಿಯವರು ಭಾರತದಲ್ಲಿ ಆಲ್ಸ್ಟೋಮ್‌ನ ಮಹತ್ವದ ಹೂಡಿಕೆಗಳ ಕುರಿತು ಮಾಹಿತಿ ಪಡೆದರು. ಇದು ಉದ್ಯೋಗ ಸೃಷ್ಟಿ ಮತ್ತು ಭಾರತದ ರೈಲು ಕ್ಷೇತ್ರದ ಬೆಳವಣಿಗೆಗೆ ಕೊಡುಗೆ ನೀಡುತ್ತಿದೆ. ಭಾರತದಲ್ಲಿ ಮತ್ತಷ್ಟು ವಿಸ್ತರಣೆ ಮತ್ತು ಹೂಡಿಕೆಗಳಿಗಾಗಿ ಆಲ್ಸ್ಟೋಮ್‌ನ ಯೋಜನೆಗಳ ಕುರಿತು ಮಾರ್ಟಿನ್ ಸಿಯಾನ್ ಅವರು ಮಾಹಿತಿಯನ್ನು ಹಂಚಿಕೊಂಡರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

---

ಪ್ರಧಾನಮಂತ್ರಿ ವಿಕಸಿತ ಭಾರತ್ ಉದ್ಯೋಗ ಯೋಜನೆ ಅಡಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ನವದೆಹಲಿಯಲ್ಲಿ ೨ ಸಾವಿರ ೪೦೦ ಕೋಟಿ ರೂಪಾಯಿ ಪ್ರೋತ್ಸಾಹಧನವನ್ನು ವಿತರಿಸಲಿದ್ದಾರೆ.

ಈ ಯೋಜನೆ ಕುರಿತು ನವದೆಹಲಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವೀಯ, ಕಳೆದ ವರ್ಷದ ಆಗಸ್ಟ್‌ನಿಂದ ಇಲ್ಲಿಯವರೆಗೆ ೬೩ ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳನ್ನು ಪಿಎಂ-ವಿಬಿಆರ್‌ವೈ ಯೋಜನೆಯಡಿ ಔಪಚಾರಿಕ ಉದ್ಯೋಗ ವಲಯಕ್ಕೆ ಸೇರ್ಪಡೆಗೊಳಿಸಲಾಗಿದೆ. ಇವರಲ್ಲಿ ಸುಮಾರು ೩೦ ಪ್ರತಿಶತ ಮಹಿಳೆಯರಾಗಿದ್ದಾರೆ ಎಂದು ತಿಳಿಸಿದರು.

ಈ ಯೋಜನೆಯಡಿ ಪ್ರೋತ್ಸಾಹಧನ ಪಡೆದಿರುವ ಸಂಸ್ಥೆಗಳಲ್ಲಿ ೮೦ ಪ್ರತಿಶತಕ್ಕೂ ಹೆಚ್ಚು ಸಂಸ್ಥೆಗಳು, ೨೫ಕ್ಕಿಂತ ಕಡಿಮೆ ಕಾರ್ಮಿಕರನ್ನು ಹೊಂದಿರುವ ಸಣ್ಣ ಉದ್ಯಮಗಳಾಗಿವೆ. ಮೊದಲ ಸರ್ಕಾರಿ ಉದ್ಯೋಗವನ್ನು ಪಡೆದ ಯುವಜನರಿಗೆ ೧೫ ಸಾವಿರ ರೂಪಾಯಿವರೆಗೆ ಪ್ರೋತ್ಸಾಹಧನವನ್ನು ಎರಡು ಕಂತುಗಳಲ್ಲಿ ನೀಡಲಾಗುವುದು ಎಂದು ಸಚಿವರು ಹೇಳಿದರು.

ಈ ಕಾರ್ಯಕ್ರಮದ ವೇಳೆ ೧೫ ಲಕ್ಷಕ್ಕೂ ಹೆಚ್ಚು ಫಲಾನುಭವಿಗಳ ಖಾತೆಗಳಿಗೆ ನೇರ ಹಣ ವರ್ಗಾವಣೆ ಮೂಲಕ ಪ್ರೋತ್ಸಾಹಧನ ಜಮಾ ಮಾಡಲಾಗುವುದು ಎಂದು ಸಚಿವ ಮನ್ಸುಖ್ ಮಾಂಡವೀಯ ತಿಳಿಸಿದರು.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಶ್ಚಿಮ ಬಂಗಾಳದ ಹೂಗ್ಲಿ ಜಿಲ್ಲೆಯ ತಾರಕೇಶ್ವರದಲ್ಲಿ ಇದೇ ಶನಿವಾರ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೨೩ ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ.

ದೇಶಾದ್ಯಂತ ೯.೪೪ ಕೋಟಿಗೂ ಹೆಚ್ಚು ರೈತರ ಬ್ಯಾಂಕ್ ಖಾತೆಗಳಿಗೆ ೧೮ ಸಾವಿರ ೮೮೦ ಕೋಟಿ ರೂಪಾಯಿಗಳನ್ನು ನೇರವಾಗಿ ವರ್ಗಾಯಿಸಲಾಗುವುದು. ೨.೧೮ ಕೋಟಿಗೂ ಹೆಚ್ಚು ಮಹಿಳಾ ರೈತರು ಸಹ ಈ ಕಂತಿನ ಪ್ರಯೋಜನ ಪಡೆಯುತ್ತಾರೆ. ಈ ಬಿಡುಗಡೆಯೊಂದಿಗೆ, ೨೦೧೯ ರ ಫೆಬ್ರವರಿಯಿಂದ ಪ್ರಾರಂಭವಾದಾಗಿನಿಂದ ಪಿಎಂ-ಕಿಸಾನ್ ಯೋಜನೆಯಡಿಯಲ್ಲಿ ಒಟ್ಟು ವಿತರಣೆ ೪.೪೬ ಲಕ್ಷ ಕೋಟಿ ರೂಪಾಯಿಗಳನ್ನು ಮೀರುತ್ತದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ.

---

ಆಹಾರ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಹೆಚ್ಚಿನ ಕೃಷಿ ಉತ್ಪಾದನೆ ಮಾತ್ರವಲ್ಲದೆ, ವೈಜ್ಞಾನಿಕ ಸಂಗ್ರಹಣೆ ಮತ್ತು ಆಹಾರ ಧಾನ್ಯಗಳ ಪರಿಣಾಮಕಾರಿ ವಿತರಣೆಯೂ ಅಗತ್ಯ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ಪ್ರತಿಪಾದಿಸಿದ್ದಾರೆ.

ನವದೆಹಲಿಯಲ್ಲಿ ಇಂದು ಭಾರತೀಯ ಆಹಾರ ನಿಗಮದ ವತಿಯಿಂದ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವ ಗೋದಾಮುಗಳಿಗೆ ಸ್ಮಾರ್ಟ್ ವೇರ್‌ಹೌಸಿಂಗ್ ವ್ಯವಸ್ಥೆಯ ಉದ್ಘಾಟನಾ ಸಮಾರಂಭ ಮತ್ತು ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ತಂತ್ರಜ್ಞಾನ ಮತ್ತು ಡಿಜಿಟಲೀಕರಣವು ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಪರಿವರ್ತಿಸಿದೆ ಮತ್ತು ಆಹಾರ ಧಾನ್ಯ ವಿತರಣೆಯಲ್ಲಿ ಪಾರದರ್ಶಕತೆಯನ್ನು ಬಲಪಡಿಸಿದೆ. ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯಡಿ ವಿತರಿಸಲಾದ ಸುಮಾರು ೯೮.೫ ಪ್ರತಿಶತ ಆಹಾರ ಧಾನ್ಯಗಳು ಇ-ಪಿಒಎಸ್ ಸಾಧನಗಳ ಮೂಲಕ ಆಧಾರ್-ದೃಢೀಕರಿಸಲ್ಪಟ್ಟಿವೆ ಎಂದು ಅವರು ಹೇಳಿದರು.

---

ಎಲ್ಲಾ ಸಂಸ್ಕರಣಾಗಾರಗಳು ಹೆಚ್ಚಿನ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸಾಕಷ್ಟು ಕಚ್ಚಾ ತೈಲ ದಾಸ್ತಾನುಗಳನ್ನು ಹೊಂದಿವೆ ಎಂದು ಕೇಂದ್ರ ಸರ್ಕಾರ ಹೇಳಿದೆ.

ಈ ಕುರಿತು ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ಕಳೆದ ಮೂರು ದಿನಗಳಲ್ಲಿ ೧.೩೮ ಕೋಟಿ ಎಲ್‌ಪಿಜಿ ಸಿಲಿಂಡರ್ ಬುಕಿಂಗ್‌ಗಳನ್ನು ಸ್ವೀಕರಿಸಲಾಗಿದೆ ಮತ್ತು ೧.೪೭ ಕೋಟಿ ಸಿಲಿಂಡರ್‌ಗಳನ್ನು ವಿತರಿಸಲಾಗಿದೆ ಎಂದು ತಿಳಿಸಿದರು.

ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವಾಲಯದ ನಿರ್ದೇಶಕ ಓಪೇಶ್ ಕುಮಾರ್ ಶರ್ಮಾ ಮಾತನಾಡಿ, ೮೨ ಸಾವಿರದ ೩೭೦ ಮೆಟ್ರಿಕ್ ಟನ್ ಸರಕುಗಳನ್ನು ಹೊತ್ತ ಎಲ್‌ಎನ್‌ಜಿ ವಾಹಕ ದಿಶಾ ನಾಳೆ ಬೆಳಗ್ಗೆ ಗುಜರಾತ್‌ನ ದಹೇಜ್ ಬಂದರು ತಲುಪುವ ನಿರೀಕ್ಷೆಯಿದೆ. ಈ ಹಡಗು ಸೋಮವಾರ ಹಾರ್ಮುಜ್ ಜಲಸಂಧಿಯನ್ನು ದಾಟಿತ್ತು ಎಂದು ಮಾಹಿತಿ ನೀಡಿದರು.

---

ಅಮೆರಿಕ ಮತ್ತು ಇರಾನ್ ನಡುವಿನ ಮಹತ್ವದ ಒಪ್ಪಂದ ಜಾರಿಗೆ ಬಂದಿದ್ದು, ಸುಮಾರು ನಾಲ್ಕು ತಿಂಗಳಿಂದ ಮುಂದುವರಿದಿದ್ದ ನೇರ ಸಂಘರ್ಷಕ್ಕೆ ತಕ್ಷಣದ ವಿರಾಮ ದೊರೆತಿದೆ. ಜೊತೆಗೆ, ಸಮಗ್ರ ಶಾಂತಿ ಒಪ್ಪಂದದ ಕುರಿತು ಮಾತುಕತೆ ನಡೆಸಲು ೬೦ ದಿನಗಳ ಕಾಲಾವಕಾಶವನ್ನು ಒದಗಿಸಿದೆ.

ಸ್ವಿಟ್ಜರ್‌ಲ್ಯಾಂಡ್‌ನಲ್ಲಿ ನಡೆಯಲಿರುವ ಸಭೆಗೆ ಮುನ್ನ ಡಿಜಿಟಲ್ ಸಹಿ ಮಾಡಲಾದ ೧೪ ಅಂಶಗಳ ಈ ಒಪ್ಪಂದವು ತಕ್ಷಣದ ಕದನ ವಿರಾಮವನ್ನು ಜಾರಿಗೊಳಿಸುವುದರ ಜೊತೆಗೆ, ಉಭಯ ರಾಷ್ಟ್ರಗಳು ಪರಸ್ಪರ ದಾಳಿ ನಡೆಸುವ ಕ್ರಮಗಳಿಂದ ದೂರವಿರಲು ಬದ್ಧವಾಗಿವೆ. ಅಲ್ಲದೆ, ಇರಾನ್‌ನ ಅಣು ಕಾರ್ಯಕ್ರಮ ಮತ್ತು ಪ್ರಾದೇಶಿಕ ಭದ್ರತಾ ವಿಷಯಗಳಿಗೆ ಸಂಬಂಧಿಸಿದ ದೀರ್ಘಕಾಲೀನ ವಿವಾದಗಳನ್ನು ಬಗೆಹರಿಸಲು ಒಂದು ಚೌಕಟ್ಟನ್ನು ರೂಪಿಸಿದೆ.

---

ಅಮೆರಿಕ ರಾಯಭಾರಿ ಸರ್ಜಿಯೊ ಗೋರ್ ನವದೆಹಲಿಯಲ್ಲಿ ಇಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದರು.

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಸಚಿವ ಅಮಿತ್ ಶಾ, ಉಭಯ ರಾಷ್ಟ್ರಗಳ ನಡುವಿನ ಭದ್ರತಾ ಸಹಕಾರವನ್ನು, ವಿಶೇಷವಾಗಿ ಭಯೋತ್ಪಾದನೆ ನಿಗ್ರಹ ಮತ್ತು ಮಾದಕ ವಸ್ತುಗಳ ನಿಯಂತ್ರಣ ಕ್ಷೇತ್ರಗಳಲ್ಲಿ ಸಹಕಾರ ಮತ್ತಷ್ಟು ಬಲಪಡಿಸುವ ಕುರಿತು ಸುದೀರ್ಘ ಚರ್ಚೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ.

---

ಸಮುದಾಯ ರೇಡಿಯೋಗಳು ದೇಶದ ಕಟ್ಟ ಕಡೆಯ ವ್ಯಕ್ತಿಗೂ ತಲುಪುವ ಗುರಿಯನ್ನು ಹೊಂದಿವೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್.ಮುರುಗನ್ ಹೇಳಿದ್ದಾರೆ.

ಚೆನ್ನೈನ ಎಐಆರ್‌ನಲ್ಲಿ ಇಂದು ನಡೆದ ಪುಸ್ತಕ ಬಿಡುಗಡೆ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಜನರ ಪ್ರಯೋಜನಕ್ಕಾಗಿ ಜಾಗೃತಿ ಸಂದೇಶಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ತಲುಪಿಸಲು ರೇಡಿಯೊದಲ್ಲಿನ ನಾವೀನ್ಯತೆ ಮುಖ್ಯವಾಗಿದೆ ಎಂದು ಹೇಳಿದರು.

---

ಬ್ರೆಜಿಲ್‌ನ ಬ್ರೆಸಿಲಿಯಾದಲ್ಲಿ ನಡೆದ ೧೯ನೇ ಅಂತಾರಾಷ್ಟ್ರೀಯ ವಿಶ್ವ ಔಷಧೀಯ ಉತ್ಪನ್ನಗಳ ಸಭೆಯಲ್ಲಿ ಭಾರತ, ಜಾಗತಿಕ ಔಷಧೀಯ ಗುಣಮಟ್ಟದ ಮಾನದಂಡಗಳಲ್ಲಿ ತನ್ನ ಬೆಳೆಯುತ್ತಿರುವ ನಾಯಕತ್ವವನ್ನು ಪುನರುಚ್ಚರಿಸಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಅಡಿಯಲ್ಲಿ ಬರುವ ಭಾರತೀಯ ಔಷಧೀಯ ಆಯೋಗದ ನಿಯೋಗವು ಈ ತಿಂಗಳ ೧೫ ರಿಂದ ೧೭ ರವರೆಗೆ ನಡೆದ ಮೂರು ದಿನಗಳ ಸಭೆಯಲ್ಲಿ ಭಾಗವಹಿಸಿತ್ತು.

___________ ಮುಕ್ತಾಯ __________